**ದಿನಾಂಕಃ 01.03.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಎ ಸಿ ಎಸ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಚಾರಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ತಿಳಿದು ಸಹಿ ಮಾಡಿರುತ್ತೇನೆ.

ದಿನಾಂಕ 29.09.2022ರ ನೊಂದಾಯಿತ ಕ್ರಯದ ಕರಾರು ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು **ನಿಪಿ-01** ಎಂದು, ದಿನಾಂಕ 18.09.2024ರ ತಿಳುವಳಿಕೆ ಪತ್ರದ ಕಛೇರಿ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು **ನಿಪಿ-02** ಎಂದು, ಎರಡು ಅಂಚೆ ರಶೀದಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಒಟ್ಟಾಗಿ **ನಿಪಿ-03** ಎಂದು, ಎರಡು ಟ್ರ್ಯಾಕ್ ಕನ್ ಸೈನ್ ಮೆಂಟ್ ನ ನಕಲುಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು **ನಿಪಿ-04 ಮತ್ತು ನಿಪಿ-05** ಎಂದು, ಪಟ್ಟೇಹುಂಡಿ ಗ್ರಾಮದ ಸರ್ವೆ ನಂ.35/5ರ ಎರಡು ಪಹಣಿ ಪತ್ರಿಕೆಗಳ ಗಣಕೀಕೃತ ನಕಲುಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು **ನಿಪಿ-06 ಮತ್ತು ನಿಪಿ-07** ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಪ್ರತಿವಾದಿಗಳು ಏಕಪಕ್ಷೀಯವಾಗಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

**ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ**
**ನ್ಯಾಯಾಧೀಶರು, ತಿ.ನರಸಿಪುರ**